# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ:- ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ನೀತಿ ಮತ್ತು ವಿಧಾನವನ್ನು ಮಾರ್ಪಡಿಸುವ ಕುರಿತು.

ಓದಲಾಗಿದೆ:- 1. ಸರ್ಕಾರದ ಆದೇಶ ಸಂ:ಎಂಡಬ್ಲ್ಯೂಡಿ 06 ಎಂಡಿಸಿ 2021, ದಿ:26.02.2021.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ಇವರ ಏಕ ಕಡತ ಸಂ: ಕೆಎಂಡಿಸಿ/ಜಿಕೆವೈ/2019-20/ಟೆಂಡರ್/ಸಿಆರ್ 62, ದಿ:03.09.2021.

3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರ ಪತ್ರ ಸಂ:RDWSD/200/CE/2021-22/955, ದಿ:25.08.2021.

*****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶ ದಿ:26.02.2021 ರಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವುದು, ಪಂಪ್‌ಸೆಟ್ ಅಳವಡಿಸುವುದು ಹಾಗೂ ವಿದ್ಯುದ್ದೀಕರಣ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ನಿಯಮಾನುಸಾರ ಟೆಂಡರ್ ಪರಿಶೀಲನಾ ಸಮಿತಿಯಲ್ಲಿ ಮಂಡಿಸಿ ನಂತರ ಒಂದೇ ಟೆಂಡರ್ ಅಡಿ ಕರೆದು ಅನುಷ್ಠಾನಗೊಳಿಸಲು ಹಲವು ಷರತ್ತುಗಳಿಗೆ ಒಳಪಟ್ಟು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ಈ ಯೋಜನೆಯಡಿ ಕೊಳವೆ ಬಾವಿಗಳನ್ನು "ನೀರಿಲ್ಲದಿದ್ದರೆ ಹಣವಿಲ್ಲ" (No water No Money) ಎಂಬ ಷರತ್ತಿನ ಆಧಾರದ ಮೇಲೆ ಟೆಂಡರ್ ಆಹ್ವಾನಿಸುವ ಷರತ್ತನ್ನು ವಿಧಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಏಕ ಕಡತದಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ಕುಡಿಯುವ ನೀರು ಕೊಳವೆಬಾವಿ ಕೊರೆಯುವ ಯೋಜನೆಯ ರೀತಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ ಗಂಗಾ ಕಲ್ಯಾಣ ಯೋಜನೆಯಡಿಯ ಅನುಷ್ಠಾನದ ನೀತಿ ಮತ್ತು ವಿಧಾನವನ್ನು ಮಾರ್ಪಡಿಸುವ ಬಗ್ಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ರವರಿಂದ ಮಾಹಿತಿ ಪಡೆದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿನ ಪತ್ರದಲ್ಲಿ ಆಯುಕ್ತರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆವತಿಯಿಂದ ಕೈಗೆತ್ತಿಕೊಳ್ಳಲಾಗಿರುವ ಕುಡಿಯುವ ನೀರು ಕೊಳವೆಬಾವಿ ಕೊರೆಯುವ ಕಾಮಗಾರಿಗಳ ಯೋಜನೆಯಲ್ಲಿ ಕೊಳವೆಬಾವಿ ಕೊರೆಯುವ ಮುನ್ನ ಭೂ ವಿಜ್ಞಾನಿ ಮೂಲಕ ಸ್ಥಳ ಪರೀಕ್ಷಣೆ ಕೈಗೊಳ್ಳಲಾಗುತ್ತಿದ್ದು, ಈ ಕೊಳವೆ ಬಾವಿಗಳ ಆಳವನ್ನು ಮತ್ತು ಇತರೆ ಕಾಮಗಾರಿಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕ್ಷೇತ್ರೀಯ ಕಾರ್ಯಪಾಲಕ ಅಭಿಯಂತರರ ಅಳತೆ ಪುಸ್ತಕದಲ್ಲಿ ದೃಡೀಕರಿಸಿದಂತೆ ಆಳಕ್ಕೆ ಅನುಗುಣವಾಗಿ ವೆಚ್ಚವನ್ನು ಭರಿಸಲಾಗುವುದೆಂದು ಹಾಗು ಕೊಳವೆಬಾವಿ ಕೊರೆದ ಕಾಮಗಾರಿಗಷ್ಟೆ ಬಿಲ್ ಮೊತ್ತ ಪಾವತಿಸಲಾಗುವುದೆಂದು ತಿಳಿಸಿರುತ್ತಾರೆ.

KMDC LTD.
Head Office.Bangalore
03 DEC 2021
No.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಯುವ ಕಾಮಗಾರಿಗಳಿಗೆ ಟೆಂಡರ್ ಗಳನ್ನು ಆಹ್ವಾನಿಸಲು ಮತ್ತು ಅಂತಿಮಗೊಳಿಸಲು ಬಹಳಷ್ಟು ವಿಳಂಬವಾಗುತ್ತಿರುವುದರಿಂದ ಹಾಗೂ ನೀರಿಲ್ಲದಿದ್ದರೆ ಹಣವಿಲ್ಲ (No water No Money) ಪದ್ಧತಿಯಲ್ಲಿ ಅನುಮಾನಾಸ್ಪದ ಕಂಡುಬರುತ್ತಿರುವುದರಿಂದ ಹಾಗೂ ಪ್ರದೇಶದಿಂದ ಪ್ರದೇಶಕ್ಕೆ ಕೊರೆಯುವ ವೆಚ್ಚವು ವ್ಯತ್ಯಾಸವಾಗುತ್ತಿರುವುದರಿಂದ ಇದು ಇಲಾಖೆಗೆ ಕಷ್ಟಕರವಾಗಿ ಸಂಭವಿಸುತ್ತಿರುತ್ತದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಕೈಗೆತ್ತಿಕೊಂಡಿರುವ ಕುಡಿಯುವ ನೀರು ಕೊರೆಯುವ ಯೋಜನೆಯು ವ್ಯವಸ್ಥಿತ ಪದ್ಧತಿಯಾಗಿದ್ದು, ಕೊಳವೆ ಬಾವಿ ಕೊರೆಯುವ ಮುನ್ನ ಮತ್ತು ನಂತರ ಸ್ಥಳ ಪರಿವೀಕ್ಷಣೆ ಕೈಗೊಳ್ಳುವ ಹಾಗೂ ನಿಗದಿತ ಕೊರೆಯುವ ವೆಚ್ಚ ಹಾಗೂ ಸಮರ್ಪಕ ಪರಿಶೀಲನಾ ವ್ಯವಸ್ಥೆಯನ್ನು ಹೊಂದಿರುವುದರಿಂದ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆಯುವ ಯೋಜನೆಯನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ:MWD 81 MDC 2021, ಬೆಂಗಳೂರು ದಿ:02.12.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂ:MWD 6 MDC 2021 ದಿ:26.02.2021 ನ್ನು ಮಾರ್ಪಡಿಸಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆಬಾವಿಗಳನ್ನು ಕೊರೆಯುವ, ಪಂಪ್‌ಸೆಟ್ ಅಳವಡಿಸುವ ಹಾಗೂ ವಿದ್ಯುದ್ದೀಕರಣ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ಈ ಕೂಡಲೇ ಜಾರಿಗೆ ಬರುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಿದೆ.

ಈ ಕುರಿತು ನಿಬಂಧನೆ ಮತ್ತು ಷರತ್ತುಗಳ ಕುರಿತು ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಿಬೂಬ ಸಾಬ)
ಸರ್ಕಾರದ ಉಪ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.

ಗೆ,

1. ಮಹಾಲೇಖಪಾಲರು, (ಎ & ಇ, ಲೆಕ್ಕಪರಿಶೋಧನೆ-1,2) ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
3. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ವಿ.ವಿ.ಗೋಪುರ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸಮನ್ವಯಾಧಿಕಾರಿ, ಸಹಾಯವಾಣಿ ಕೇಂದ್ರ (24*7), ವಸಂತ ನಗರ, ಬೆಂಗಳೂರು.
7. ಹೆಚ್ಚುವರಿ ಪ್ರತಿ.